**ಸಾಕ್ಷಿಗೆ ದಿನಾಂಕಃ 10.12.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.CBK ರವರಿಂದಃ**

1) ನಾನು ಈ ಪ್ರಕರಣದಲ್ಲಿ ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, **ಪೋಲಿಸರಿಗೆ ನೀಡಿರುವ ದೂರನ್ನು** ನಿ.ಪಿ.2 ಎಂದು, **ಸ್ಥಳ ಪಂಚನಾಮೆಯನ್ನು** ನಿ.ಪಿ.3 ಎಂದು, ಕೃತ್ಯ ನಡೆದ ಸ್ಥಳದ **ನಕ್ಷೆಯನ್ನು** ನಿ.ಪಿ.4 ಎಂದು, ವಾಹನ ಪಂಚನಾಮೆ ಪರಿಶೀಲನೆಯನ್ನು ನಿ.ಪಿ.5 ಎಂದು ಗುರುತಿಸಿದೆ.

3) **ಐ.ಎಂ.ವಿ ಕಾಯ್ದೆ ಕಲಂ 133** ರ ಅಡಿಯಲ್ಲಿ ನೀಡಿರುವಂತಹ **ನೋಟಿಸ್** ಅನ್ನು ನಿ.ಪಿ.6 ಎಂದು ಮತ್ತು **ಆ ನೋಟಿಸಿಗೆ ನೀಡಿರುವಂತಹ ಉತ್ತರವನ್ನು** ನಿ.ಪಿ.7 ಎಂದು ಗುರುತಿಸಿದೆ.

4) **ಐ.ಎಂ.ವಿ ಕಾಯ್ದೆ ಕಲಂ 133** ರ ಅಡಿಯಲ್ಲಿ ನೀಡಿರುವಂತಹ ಮತ್ತೊಂದು **ನೋಟಿಸ್** ಅನ್ನು ನಿ.ಪಿ.**8** ಎಂದು ಮತ್ತು **ಆ ನೋಟಿಸಿಗೆ ನೀಡಿರುವಂತಹ ಉತ್ತರವನ್ನು** ನಿ.ಪಿ.**9** ಎಂದು ಗುರುತಿಸಿದೆ.

5) ಐಎಂವಿ ವರದಿಗಳನ್ನು ನಿ.ಪಿ.**10** ಮತ್ತು ನಿ.ಪಿ.**11** ಎಂದು, ಗಾಯದ ಪ್ರಮಾಣ ಪತ್ರವನ್ನು ನಿ.ಪಿ.**12** ಎಂದು, ಮತ್ತು ಅಂತಿಮ ವರದಿಯನ್ನು ನಿ.ಪಿ.**13** ಎಂದು ಗುರುತಿಸಿದೆ.

**<u>ಸೂಚನೆಃ</u>** ನಿ.ಪಿ.1 ರಿಂದ ನಿ.ಪಿ.13 ಎಂದು ಗುರುತು ಆಗಿರುವ ದಾಖಲೆಗಳು ಮತ್ತೊಂದು ಪ್ರಕರಣದಿಂದ ಪಡೆದುಕೊಂಡಿರುವಂತಹ ಧೃಡೀಕೃತ ನಕಲುಗಳು ಆಗಿವೆ.

6) **ಡಿಸ್ಚಾರ್ಜ್ ಸಮ್ಮರಿ ಅನ್ನು** ನಿ.ಪಿ.**14** ಎಂದು ಗುರುತಿಸಿದೆ.

7) ಈಗ ಸಾಕ್ಷಿದಾರರು ತಮ್ಮ ಮೂಲ ಆಧಾರ್ ಕಾರ್ಡ್ , ಚಾಲನಾ ಪರವಾನಗಿ ಮತ್ತು ಪಾನ್ ಕಾರ್ಡ್ ದಾಖಲೆಗಳನ್ನು ಮತ್ತು ಇದೇ ದಾಖಲೆಗಳ ಫೋಟೋ ಪ್ರತಿಗಳನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಗಳನ್ನು ಮತ್ತು ಫೋಟೋ ಪ್ರತಿಗಳನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಗಳನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಗಳನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಗಳನ್ನು ನಿ.ಪಿ.**15** ರಿಂದ ನಿ.ಪಿ.**17**

ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಗಳನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

8) ಒಟ್ಟು **20** ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**18** ಎಂದು ಗುರುತಿಸಿದೆ.

9) ಒಟ್ಟು **12 Prescriptions** ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**19** ಎಂದು ಗುರುತಿಸಿದೆ.

10)ಆದ ಕಾರಣದಿಂದ ಪ್ರಾರ್ಥನೆಯಂತೆ ನನಗೆ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲು: 1 ನೇ ಎದುರುದಾರರ ಪರವಾಗಿಃ**

1 ನೇ ಎದುರುದಾರರು ಏಕ ಪಕ್ಷೀಯವಾಗಿದ್ದಾರೆ. ಆದ ಕಾರಣದಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಪಾಟೀ ಸವಾಲು: 2 ನೇ ಎದುರುದಾರರ ಪರ ವಕೀಲರಿಂದಃ**

ಸದರಿ ಎದುರುದಾರರು ಮತ್ತು ಅವರ ಪರ ವಕೀಲರು ಹಾಜರಿಲ್ಲ ಮತ್ತು ಯಾವುದೇ ಲಿಖಿತ ಹೇಳಿಕೆ ಸಲ್ಲಿಸಿಲ್ಲ. ಆದ ಕಾರಣದಿಂದ ಯಾವುದೇ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಮರು ವಿಚಾರಣೆ: ಇಲ್ಲ.</u>**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.